**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ 20/2022**

**ಪಿರ್ಯಾದಿ** ಃ ರಾಜ್ಯದ ಪರವಾಗಿ ಲಕ್ಕವಳ್ಳಿ ಪೊಲೀಸರು

**- ವಿರುದ್ಧ -**

**ಆರೋಪಿ/ತರುಃ**

ದಿನೇಶನಾಯ್ಕ ಬಿನ್ ರಾಮ್ ಜೀ ನಾಯ್ಕ, 35 ವರ್ಷ, ವಾಸ ಃ ಶನಿಮಹಾತ್ಮ ದೇವಸ್ಥಾನ ಹತ್ತಿರ, ಬಾವಿಕೆರೆ ಗ್ರಾಮ, ಲಕ್ಕವಳ್ಳಿ ಹೋಬಳಿ, ತರೀಕೆರೆ ತಾಲ್ಲೂಕು

****

**-ಃದೋಷಾರೋಪಣೆಃ-**

ಶ್ರೀ ಶಿವಕುಮಾರ್.ಆರ್., ಬಿ.ಎ.ಎಲ್., ಎಲ್.ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ ಆದ ನಾನು ಆರೋಪಿಯಾದ ನಿಮ್ಮ ವಿರುದ್ದ ಮಾಡುವ ದೋಷಾರೋಪಣೆ ಏನೆಂದರೆಃ-

ದಿನಾಂಕ 07.09.2021 ರಂದು ಸಂಜೆ 04.00 ಗಂಟೆ ಸಮಯದಲ್ಲಿ ಲಕ್ಕವಳ್ಳಿ ಪೊಲೀಸ್ ಠಾಣಾ ಸರಹದ್ದಿನ ಬಾವಿಕೆರೆ ಗ್ರಾಮದ ಕರಕುಚ್ಚಿ ರಸ್ತೆಯಲ್ಲಿರುವ ಮಸೀದಿ ಪಕ್ಕದ ರಸ್ತೆಯಲ್ಲಿ ಆರೋಪಿಯಾದ ನೀವು ರೂ.1250/- ಬೆಲೆಯ 90 ಎಂ.ಎಲ್.ನ ಓರಿಜಿನಲ್ ಚಾಯ್ಸ್ ಡೀಲಕ್ಸ್ ವಿಸ್ಕಿಯ 36 ಪೌಚ್ ಗಳನ್ನು ಯಾವುದೇ ಪರವಾನಗಿ ಇಲ್ಲದೇ ಅಕ್ರಮವಾಗಿ ಇಟ್ಟುಕೊಂಡಿದ್ದು, ಆದಕಾರಣ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ 32 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಎರಡನೆಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ, ಆರೋಪಿಯಾದ ನೀವು ರೂ.1250/- ಬೆಲೆಯ 90 ಎಂ.ಎಲ್.ನ ಓರಿಜಿನಲ್ ಚಾಯ್ಸ್ ಡೀಲಕ್ಸ್ ವಿಸ್ಕಿಯ 36 ಪೌಚ್ ಗಳನ್ನು ಯಾವುದೇ ಪರವಾನಗಿ ಇಲ್ಲದೇ ಅಕ್ರಮವಾಗಿ

ಮಾರಾಟ ಮಾಡಲು ಇಟ್ಟುಕೊಂಡಿದ್ದು, ಆದಕಾರಣ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ನೀವು ಸದರಿ ಆರೋಪ ಮೇಲೆ ಈ ನ್ಯಾಯಾಲಯದಿಂದ ವಿಚಾರಣೆಗೆ ಗುರಿಯಾಗತಕ್ಕುದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕ ಃ 14.11.2022

ಸಹಿ

**(ಶಿವಕುಮಾರ್.ಆರ್)**
**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ.**